# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 1982 (2333) |
| ಸದಸ್ಯರ ಹೆಸರು | | ಶ್ರೀ ಸುನೀಲ್ ವಲ್ಯಾಪುರೆ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | | 21-03-2022 |
| ಉತ್ತರಿಸಬೇಕಾದ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಪ್ರಶ್ನೆ | | ಉತ್ತರ |
| ಅ) | ಉನ್ನತ ಶಿಕ್ಷಣ ಇಲಾಖೆಯಲ್ಲಿ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ನಿವೃತ್ತಿಯಿಂದ ತೆರವಾದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದಿಂದ ಆರ್ಥಿಕ ಇಲಾಖೆ ಅನುಮತಿ ನೀಡಿದ್ದರೂ ಅನುಮೋದನೆ ಕಾರಣಗಳೇನು; | ಸರ್ಕಾರದ ಪತ್ರ ಸಂಖ್ಯೆ:ಇಡಿ/240/ಯುಪಿಸಿ/2014, ದಿನಾಂಕ:01.09.2017 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ, ದಿನಾಂಕ:31.12.2015 ರೊಳಗೆ ನಿವೃತ್ತಿ, ಮರಣ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಇರುವ ಬೋಧಕ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದ್ದು, ಅದರಂತೆ. ಹುದ್ದೆಗಳನ್ನು ಭರ್ತಿ ಮಾಡಲು ಇಲಾಖಾವತಿಯಿಂದ ಕ್ರಮವಹಿಸಲಾಗುತ್ತಿತ್ತು.<br><br>ಆದರೆ, ಕೋವಿಡ್-19ರ ಹಿನ್ನಲೆಯಲ್ಲಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವುದರಿಂದ 2020-21ನೇ ಸಾಲಿನಲ್ಲಿ ಹಾಗೂ ಸರ್ಕಾರದ ಮುಂದಿನ ಆದೇಶದವರೆಗೆ ಯಾವುದೇ ಹೊಸ ಅನುದಾನ ರಹಿತ ವಿದ್ಯಾ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸುವಂತಿಲ್ಲವೆಂದು ಆರ್ಥಿಕ ಇಲಾಖೆ ಇವರ ಸುತ್ತೋಲೆ ಸಂಖ್ಯೆ:ಆಇ/157/ವೆಚ್ಚ-8/2020, ದಿನಾಂಕ: 10.06.2020 ರನ್ವಯ ಆರ್ಥಿಕ ಮಿತವ್ಯಯ ಆದೇಶ ಜಾರಿಗೊಳಿಸಿದ್ದರಿಂದ ಬೋಧಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳುತ್ತಿಲ್ಲ.<br><br>ಆದಾಗ್ಯೂ, ಖಾಸಗಿ ಅನುದಾನಿತ ಕಾಲೇಜುಗಳಲ್ಲಿನ ಬೋಧಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಸರ್ಕಾರ ಹಾಗೂ ಇಲಾಖೆಯ ವಿವಿಧ ಹಂತಗಳಲ್ಲಿ ಬಾಕಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಆರ್ಥಿಕ ಮಿತವ್ಯಯ ಆದೇಶವನ್ನು ಸಡಿಲಿಸಿ ಸಹಮತಿ ನೀಡುವಂತೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. |
| ಆ) | ಈ ಹುದ್ದೆಗಳನ್ನು ಭರ್ತಿ ಮಾಡದಿರುವುದರಿಂದ ನಿರುದ್ಯೋಗಿ ಉಪನ್ಯಾಸಕರ ವಯೋಮಿತಿ ಮೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ.<br><br>ಈಗಾಗಲೇ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಬೋಧಕರ ಹುದ್ದೆಯ ನೇರ ನೇಮಕಾತಿಗಾಗಿ ಸರ್ಕಾರದ ಆದೇಶ ಸಂಖ್ಯೆ:ಇಡಿ/49/ಯುಪಿಸಿ/2018, ದಿನಾಂಕ: 20.06.2018 ರಲ್ಲಿ ಗರಿಷ್ಠ ವಯೋಮಿತಿಯನ್ನು ಹೆಚ್ಚಿಸಿದ್ದು, ಅದರಂತೆ, ಸಾಮಾನ್ಯ ಅಭ್ಯರ್ಥಿಗಳಿಗೆ-40 ವರ್ಷಗಳು, ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-II(a), II (b), III(a) ಮತ್ತು III (b) ಗಳಿಗೆ-43 ವರ್ಷಗಳು ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-I ಕ್ಕೆ-45 ವರ್ಷಗಳೆಂದು ಹೆಚ್ಚಿಸಲಾಗಿದೆ ಹಾಗೂ ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ:ಇಡಿ/87/ಯುಪಿಸಿ/2016, ದಿನಾಂಕ:13.12.2018 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪೂರ್ಣಕಾಲಿಕ ಬೋಧನಾನುಭವ ಹೊಂದಿರುವ |

| | | |
|---|---|---|
| | | ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿಯನ್ನು ನಿಗದಿಪಡಿಸುವುದರೊಂದಿಗೆ ಅವರು ಬೋಧನಾನುಭವ ಹೊಂದಿರುವ ಸೇವಾವಧಿ ಅಥವಾ 5 ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ಅವಧಿಗೆ ಗರಿಷ್ಠ ವಯೋಮಿತಿಯಲ್ಲಿ ವಿನಾಯಿತಿ ನೀಡಲು ಸರ್ಕಾರವು ಅವಕಾಶ ಕಲ್ಪಿಸಿದೆ. |
| ಇ) | ಈ ಹುದ್ದೆಗಳನ್ನು ಭರ್ತಿ ಮಾಡಿ ಸರ್ಕಾರದಿಂದ ಆದೇಶ ಹೊರಡಿಸಲಾಗುವುದೇ; ಸದರಿ ಹುದ್ದೆಗಳು ಸುಮಾರು 6 ವರ್ಷಗಳಿಂದ ನಿವೃತ್ತಿಯಿಂದ ತೆರವಾಗಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; | ಸರ್ಕಾರದ ಪತ್ರ ಸಂಖ್ಯೆ:ಇಡಿ/240/ಯುಪಿಸಿ/2014, ದಿನಾಂಕ:01.09.2017 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ, ದಿನಾಂಕ:31.12.2015 ರೊಳಗೆ ನಿವೃತ್ತಿ, ಮರಣ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಇರುವ ಬೋಧಕ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ. ಪ್ರಸ್ತುತ ಆರ್ಥಿಕ ಇಲಾಖೆಯ ಮಿತವ್ಯಯ ಆದೇಶ ಜಾರಿಯ ಹಿನ್ನೆಲೆಯಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಬೋಧಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಸರ್ಕಾರ ಹಾಗೂ ಇಲಾಖೆಯ ವಿವಿಧ ಹಂತಗಳಲ್ಲಿ ಬಾಕಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಆರ್ಥಿಕ ಮಿತವ್ಯಯ ಆದೇಶವನ್ನು ಸಡಿಲಿಸಿ ಸಹಮತಿ ನೀಡುವಂತೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. |
| ಈ) | ಸರ್ಕಾರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕೂಡಲೇ ಕ್ರಮ ಕೈಗೊಳ್ಳುವುದೇ? | |

ಇಡಿ 58 ಯುಪಿಸಿ 2022

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು